**ದಿನಾಂಕ :23-02-2022 ರಂದು ಬುಧವಾರ ಬೆಳಗ್ಗೆ 11:00 ಗಂಟೆಗೆ ಅನ್ನಸಂದ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು :**

| | |
|---|---|
| 1. | ಶ್ರೀ. ಜಿ.ಡಿ.ಸೋಮಯ್ಯ (ಸಹಾಯಕ ಅಭಿಯಂತರರು) |
| 2. | ಶ್ರೀ. ಮೊಹಮದ್ ಮುದಾಸಿರ್(ಕಿರಿಯ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 3. | ಶ್ರೀ. ಜಯಪ್ರಕಾಶ್ ( ತೆರಿಗೆ ನಿರೀಕ್ಷಕರು ) |
| 4. | ಶ್ರೀ. ಮಧು ಕುಮಾರ್ |
| 5. | ಶ್ರೀ. ಸುಭಾಷ್ |
| 6. | ಶ್ರೀ.ಕೆ.ಆರ್.ಸಿ. ವಾರಿಯರ್ಸ್ |
| 7. | ನಿವಾಸಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಆಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿಧಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

1) **ಕೋವಿಡ್-19 ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಮೂರನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ನಲ್ಲಿ ಕೋವಿಡ್-19 ಮೂರನೇ ಅಲೆಗೆ ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗೃತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಗೈರಾಜರಾಗಿದ್ದ ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

2) **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯ ಜಗದೀಶ್‌ನಗರದಲ್ಲಿ ಹೊಸದಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ವತಿಯಿಂದ 7.50 ದರ ಲಕ್ಷ ಲೀಟರ್ ಸಾಮರ್ಥ್ಯದ ಕಾವೇರಿ ನೀರಿನ ಕುಡಿಯುವ ನೀರಿನ ತೊಟ್ಟಿಯನ್ನು ನಿರ್ಮಿಸಿ ಸುಮಾರು 5 ವರ್ಷಗಳಿಂದ ಸಾರ್ವಜನಿಕರು ಅನುಭವಿಸುತ್ತಿದ ತೊಂದರೆಯನ್ನು ನೀಗಿಸಿ ಕುಡಿಯುವ ನೀರಿನ್ನು ಸರಬರಾಜು ಮಾಡಿತ್ತಿರುದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಸಾರ್ವಜನಿಕರಿಂದ ಅಭಿನಂದನೆ ಕೊರಲಾಯಿತು.

3) **ಬೀದಿ ದೀಪಗಳ ನಿರ್ವಹಣೆ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಮೇಶ್‌ನಗರ ಮುಖ್ಯರಸ್ತೆ,ಅನ್ನಸಂದ್ರಪಾಳ್ಯ ಮುಖ್ಯರಸ್ತೆ ಹಾಗೂ ರೆಡ್ಡಿಪಾಳ್ಯದಲ್ಲಿ ಬೀದಿ ದೀಪಗಳು ಸಮರ್ಪಕವಾಗಿ ಉರಿಯುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸಿ ವರದಿ ಮಾಡಲು ಸೂಚಿಸಲಾಯಿತು.

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

4) **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ :-**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು ಜಗದೀಶ್‌ನಗರ 10ನೇ ಅಡ್ಡರಸ್ತೆಯಲ್ಲಿ ಡ್ರೈನ್ ಸ್ಲಾಬ್‌ಗಳನ್ನು ಸರಿಪಡಿಸುವಂತೆ, ಜಗದೀಶ್‌ನಗರ ಮುಖ್ಯರಸ್ತೆಯಲ್ಲಿ ರಸ್ತೆಗೆ ಮಾರ್ಕಿಂಗ್ ಮಾಡುವಂತೆ ಸಾರ್ವಜನಿಕರು ಕೋರಿರುತ್ತಾರೆ, ಸದರಿ ಕಾಮಗಾರಿಯನ್ನು ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ
ನೋಡೆಲ್ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂಯತರರು, ಘಣ ತಾಜ್ಯ ನಿರ್ವಹಣೆ ಕೆ.ಆರ್.ಪುರಂ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.